# 1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಮನಗರ

## S.C.103/2017

ದಿಃ 08.10.2021

(ಸಾಕ್ಷಿಗೆ ಪ್ರಮಾಣವಚನವನ್ನು ಬೋಧಿಸಲಾಯಿತು)

Cw-11 Pw-5

| | | |
|---|---|---|
| ಹೆಸರು | ಃ | ಗಾಯತ್ರಮ್ಮ |
| ಗಂಡನ ಹೆಸರು | ಃ | ಚಂದ್ರಶೇಖರ್ |
| ವಯಸ್ಸು | ಃ | 45 ವರ್ಷ |
| ಉದ್ಯೋಗ | ಃ | ಗೃಹಿಣಿ |
| ವಾಸಸ್ಥಳ | ಃ | ದೇವಮಾಚೋಹಳ್ಳಿ,<br>ಬೆಂಗಳೂರು ದಕ್ಷಿಣ ತಾಲ್ಲೂಕು |

ಮುಖ್ಯ ವಿಚಾರಣೆಃ ಸರ್ಕಾರಿ ಅಭಿಯೋಜಕರಿಂದಃ

ಚಾಸಾ.6 ನನ್ನ ಮಗ. ಮೃತ ನವೀನ್‌ಕುಮಾರ್ ನನ್ನ ಮಗ. ಚಾಸಾ.1 ನನ್ನ ಪತಿ. ಚಾಸಾ.2, 4 ಮತ್ತು 5ರವರು ನನಗೆ ಗೊತ್ತಿಲ್ಲ.ಘಟನೆಯ ಸಮಯದಲ್ಲಿ ನಾವು ಮನೆಯಲ್ಲಿಯೇ ಇದ್ದೆ. ನನ್ನ ಮಗನಿಗೆ ಯಾರು ಏನು ಮಾಡಿದರು ಎಂದು ಗೊತ್ತಿಲ್ಲ. ನನ್ನ ಮಗನ ದೇಹವನ್ನು ಆತನನ್ನು ಹೊಡೆದ ಸ್ದಳದಲ್ಲಿ ನೋಡಿದ್ದೆ. ನಂತರ ಆತನನ್ನು ಆಸ್ಪತ್ರೆಗೆ ಕರೆದುಕೊಂಡು ಹೋದೆವು. ಚಾಸಾ.6 ನನಗೆ ಯಾವುದೇ ವಿಷಯ ಹೇಳಲಿಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ. ನನ್ನ ಮಗ ನವೀನ್ ಕುಮಾರನ ಮೇಲೆ ಯಾವುದೇ ಕೊಲೆ ಪ್ರಕರಣ ಇರಲಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅಭಿಯೋಜಕರು ಕೋರಿದ್ದಾರೆ. ಅದರಂತೆ ಸಾಕ್ಷಿಯನ್ನು ಪ್ರತಿಕೂಲ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅಭಿಯೋಜಕರಿಗೆ ಅನುಮತಿ ನೀಡಲಾಗಿದೆ)

<u>ಪಾಟೀ ಸವಾಲುಃ ಸರ್ಕಾರಿ ಅಭಿಯೋಜಕರಿಂದಃ</u>

ನನಗೆ ಓದಿ ಹೇಳಿದ 9ನೇ ಕಲಂನಂತೆ ಶವ ಪಂಚನಾಮೆಯ ಕಾಲದಲ್ಲಿ ನಾನು ಆರೋಪಿಗಳ ವಿರುದ್ದ ರಾಜರಾಜೇಶ್ವರಿ ಆಸ್ಪತ್ರೆಯಲ್ಲಿ ಪೊಲೀಸರಿಗೆ ಹೇಳಿಕೆ ನೀಡಿದ್ದೇನೆಂದು ಸೂಚಿಸುವುದು ಸರಿಯಲ್ಲ. ಆರೋಪಿಗಳಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎನ್ನುವುದು ಸರಿಯಲ್ಲ.

<u>ಪಾಟೀ ಸವಾಲುಃ ಶ್ರೀ. ಟಿ.ಜಿ., ವಕೀಲರಿಂದ ಆರೋಪಿಗಳ ಪರವಾಗಿಃ ಇಲ್ಲವೆಂದಿದ್ದಾರೆ.</u>

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ ಎಂದು ಸಾಕ್ಷಿ ಒಪ್ಪಿದ್ದಾರೆ

(ಮರುಳಸಿದ್ಧಾರಾಧ್ಯ ಹೆಚ್.ಜೆ)
1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು/
ವಿಶೇಷ ನ್ಯಾಯಾಧೀಶರು,
ರಾಮನಗರ.